**ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ ಅಫಜಲಪೂರ**

**ಸಿಸಿ ನಂ. 125/2019**

ಚಾಸಾ-4 ಫ್ರಾಸಾ-3

ಸತ್ಯ ಪ್ರತಿಜ್ಞೆಯ ಮೇರೆಗೆ ಪ್ರಮಾಣಿಕೃತ ಹೇಳಿಕೆ ಪಡೆದುಕೊಳ್ಳಲಾಯಿತು.
ದಿನಾಂಕ: 13-03-2026

| | | |
|---|---|---|
| ಹೆಸರು | : | ರಜಿಯಾ ಬೀ |
| ಗಂಡನ ಹೆಸರು | : | ಸೈಫನ ಸಾಬ |
| ವಯಸ್ಸು | : | 50 ವರ್ಷ |
| ಉದ್ಯೋಗ | : | ಒಕ್ಕಲುತನ |
| ವಾಸಸ್ಥಳ | : | ಮಾಷಾಳ |

-: **ಮುಖ್ಯ ವಿಚಾರಣೆ :- ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ :-**

ಚಾಸಾ 1 ಮತ್ತು 5 ಸೊಸೆಯಾಗಬೇಕು.

ನನಗೆ ಏನು ಗೊತ್ತಿಲ್ಲ. ನಾನು ಏನು ನೋಡಿಲ್ಲ. ಪೋಲಿಸರ ಮುಂದೆ ಯಾವುದೇ ಹೇಳಿಕೆ ನೀಡಿಲ್ಲ.

(ಈ ಹಂತದಲ್ಲಿ ಸ.ಸ.ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲಿಗೆ ಅನುಮತಿ ಕೋರಿರುತ್ತಾರೆ, ಅನುಮತಿ ನೀಡಲಾಯಿತು)

<u>ಪಾಟೀ ಸವಾಲುಃ ಸ.ಸ.ಅ. ರವರಿಂದ</u>

ಈಗ ಸುಮಾರು 5-6 ವರ್ಷಗಳ ಹಿಂದೆ ನಾನು ಚಾಸಾ 5 ರವರು ಮುಜಾವರ ರವರ ಮನೆ ಮುಂದೆ ನಿಂತಿದ್ದೆವು ಎಂದರೆ ಸರಿ. ಆಗ ಜಗಳ ಆಡುವ ಶಬ್ದ ಕೇಳಿ ನಾನು ಚಾಸಾ 5 ರವರು ಹೋಗಿ ನೋಡಿರುತ್ತೇವೆ ಎಂದರೆ ಸರಿ. ಆರೋಪಿತರು ಚಾಸಾ 1 ರವರಿಗೆ ಅವಾಚ್ಯ ಶಬ್ದಗಳಿಂದ ಬೈಯ್ಯುತ್ತಾ ಹಲ್ಲೆ ಮಾಡುತ್ತಾ ಸೀರೆ ಹಿಡಿದು ಎಳೆಯುತ್ತಿರುವಾಗ ನಾನು ಚಾಸಾ 5 ರವರು ಹೋಗಿ ಜಗಳ ಬಿಡಿಸಿರುತ್ತೇವೆ ಎಂದರೆ ಸರಿ. ನಾವು ಬಿಡಿಸಿದ ನಂತರ ಚಾಸಾ 1 ರವರಿಗೆ ಆರೋಪಿತರು ಜೀವ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿ. ನಾನು ಈ ಕುರಿತು ಪೋಲಿಸರ ಮುಂದೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿ. ಸಾಕ್ಷಿ ಆರೋಪಿತರನ್ನು ನೋಡಿ ಅವರು ಇಲ್ಲ ಎಂದು ನುಡಿಯುತ್ತಾರೆ.

<u>ಪಾಟೀ ಸವಾಲುಃ ಆರೋಪಿ ಪರ ಶ್ರೀಮತಿ **SMA** ವಕೀಲರಿಂದಃ-</u>

ನಾನು ಜಗಳ ಬಿಡಿಸಿಲ್ಲ ಎಂದರೆ ಸರಿ. ಯಾರ ಯಾರ ನಡುವೆ ಜಗಳ ಆಯಿತು ಎಂದು ನನಗೆ ಗೊತ್ತಿಲ್ಲ ಎಂದರೆ ಸರಿ. ಪೋಲಿಸರು ಕರೆದಿದರಿಂದ ನಾನು ನ್ಯಾಯಾಲಯಕ್ಕೆ ಬಂದಿರುತ್ತೇನೆ ಎಂದರೆ ಸರಿ.

<u>ಮರು ವಿಚಾರಣೆಃ - ಇಲ್ಲ.</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ

ಸಿವಿಲ್ & ಪ್ರ.ದ.ನ್ಯಾ. ದಂಡಾಧಿಕಾರಿಗಳು
ಅಫಜಲಪೂರ